RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎನ್. ಓಲೇಕಾರ | ಸಿಇಒ: ಚಂದ್ರಶೇಖರ ಎನ್.ಕೆ. | ಸಹ ಸಂಪಾದಕರು: ಶಿವಕುಮಾರ

ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಸಂಪುಟ (Volume): 1 ಸಂಚಿಕೆ (Issue): 223 ಪುಟ (Page): 4 ದರ Rs. 2 ಮಂಗಳವಾರ 10 ನವೆಂಬರ್ 2026 ● 10 NOVEMBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning



ಕಾಕೋಳ ಜಿಪಂ ಕ್ಷೇತ್ರದಲ್ಲಿ ನಾಯಕನ ರಾಜಕೀಯ ನಾಯಕತ್ವದ ಪರೀಕ್ಷೆ!

25 ವರ್ಷಗಳ ಕಾಂಗ್ರೆಸ್ ಸೇವೆ; ಈ ಬಾರಿ ಟಿಕೆಟ್ ನಿರೀಕ್ಷೆಯಲ್ಲಿ ಎಚ್.ಎಂ. ನಾಯಕ

ಸಮಾಲೋಚನೆ ಸುದ್ದಿ ವಿಶೇಷ

ರಾಜಕೀಯದಲ್ಲಿ ಅಧಿಕಾರದ ಹುದ್ದೆಗಿಂತ ಪಕ್ಷದ ಸಂಘಟನೆ ಮತ್ತು ಜನರೊಂದಿಗಿನ ಒಡನಾಟವೇ ಮುಖ್ಯ ಎಂಬ ನಂಬಿಕೆಯೊಂದಿಗೆ ಕಳೆದ 25 ವರ್ಷಗಳಿಂದ ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡಿರುವ ಕಾಕೋಳ ತಾಂಡದ ಎಚ್.ಎಂ. ನಾಯಕ ಅವರು ಇದೀಗ ಕಾಕೋಳ ಜಿಲ್ಲಾ ಪಂಚಾಯಿತಿ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿಯಾಗಿ ತಮ್ಮ ರಾಜಕೀಯ ಆಸೆಯನ್ನು ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಕಾಕೋಳ ತಾಂಡ(ವೆಂಕಟಾಪುರ) ಗ್ರಾಮದಲ್ಲಿ ಬಡ ಬಂಜಾರ ಕುಟುಂಬದಲ್ಲಿ ಜನಿಸಿದ ಎಚ್. ಎಮ್. ನಾಯಕ ಸುಖ ದುಃಖಗಳ ನಡುವೆ ವಿದ್ಯಾಭ್ಯಾಸ ಪಡೆದು, ನಂತರ ಜೀವನೋಪಾಯಕ್ಕಾಗಿ ಸರ್ಕಾರದ ಗುತ್ತಿಗೆ ಕೆಲಸಗಳನ್ನು ಮಾಡುವ ಮೂಲಕ ಉತ್ತಮ ಗುತ್ತಿಗೆದಾರ ಎಂಬ ಹೆಸರು ಪಡೆಯುವ ಮೂಲಕ ಜಿಲ್ಲೆಯಾದ್ಯಂತ ಮನೆಮಾತಾಗಿದ್ದಾರೆ. ನಂತರ 2000 ಸಾಲಿನಲ್ಲಿ ಕಾಂಗ್ರೆಸ್ ಪಕ್ಷದ ಸಾಮಾನ್ಯ ಕಾರ್ಯಕರ್ತರಾಗಿ ರಾಜಕೀಯ ಜೀವನ ಆರಂಭಿಸಿದ ಎಚ್.ಎಂ. ನಾಯಕ ಅವರು, ಪಕ್ಷದ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಮುನ್ನಡೆದರು. ರಾಜಕೀಯ ಪ್ರವೇಶದ ಆರಂಭದ ದಿನಗಳಿಂದಲೇ ಸ್ಥಳೀಯ ಮಟ್ಟದಲ್ಲಿ ಜನರೊಂದಿಗೆ ಸಂಪರ್ಕ ಬೆಳೆಸಿಕೊಂಡು, ಗ್ರಾಮೀಣ ರಾಜಕಾರಣದ ಏಳುಬೀಳುಗಳನ್ನು ಅನುಭವ ಹೊಂದುವ ಮೂಲಕ ಕಾಂಗ್ರೆಸ್ ಪಕ್ಷದ ಕಟ್ಟಾಳು ಆಗಿ ನಿಂತಿದ್ದಾರೆ.



ಕುಟುಂಬದಿಂದಲೂ ಗ್ರಾಮ ಪಂಚಾಯಿತಿ ರಾಜಕಾರಣದ ನಂಟು ನಾಯಕ ಅವರಿಗೆ: 2005ರಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಸ್ಪರ್ಧಿಸಲು ಹಿರಿಯರಿಂದ ಅವಕಾಶದ ನಿರೀಕ್ಷೆಯಲ್ಲಿದ್ದರು, ಆದರೆ ಆಗಲಿಲ್ಲ ನಂತರ ಕುಟುಂಬದ ಮೂಲಕ ಗ್ರಾಮ ಪಂಚಾಯಿತಿ ರಾಜಕಾರಣದೊಂದಿಗೆ ನಿಕಟ ಸಂಪರ್ಕ ಹೊಂದಿದರು. 2010ರಲ್ಲಿ ಅವರ ತಾಯಿಯವರನ್ನ ಗ್ರಾಮ ಪಂಚಾಯಿತಿ ಸದಸ್ಯೆಯಾಗಿ ಆಯ್ಕೆ ಮಾಡುವಲ್ಲಿ ಯಶಸ್ವಿಯಾದರು. ನಂತರ 2014 ರಲ್ಲಿ ಅವರ ತಾಯಿಯವರ ಆಕಸ್ಮಿಕ ನಿಧನದ ನಂತರ ನಡೆದ ಮರುಚುನಾವಣೆಯಲ್ಲಿ ಅವರ ಪತ್ನಿ ಗ್ರಾಪಂ ಸದಸ್ಯೆಯಾಗಿ ಆಯ್ಕೆಯಾಗಿ ಸಾರ್ವಜನಿಕ ಸೇವೆಯನ್ನು ಮುಂದುವರಿಸಿದರು.



ಗೆಲ್ಲುವ ಕುದುರೆ 'ನಾಯಕ'!

ಕಾಕೋಳ ಜಿಪಂ ಕ್ಷೇತ್ರದಲ್ಲಿ ಎಚ್.ಎಂ. ನಾಯಕ ಕೇವಲ ಪಕ್ಷದ ಕಾರ್ಯಕರ್ತ ಅಥವಾ ಗುತ್ತಿಗೆದಾರರಾಗಿ ಗುರುತಿಸಿಕೊಂಡಿಲ್ಲ. ಕ್ಷೇತ್ರದ ವಿವಿಧ ಗ್ರಾಮಗಳ ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವ ಅವರು ಪಕ್ಷಾತೀತ ಒಡನಾಟವನ್ನೂ ಬೆಳೆಸಿಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಕಾಕೋಳ ಜಿಪಂ ಕ್ಷೇತ್ರದಲ್ಲಿ ಅವರು ಗೆಲ್ಲುವ ಅಭ್ಯರ್ಥಿಯಾಗಬಹುದು ಎಂಬ ರಾಜಕೀಯ ವಲಯದ ಚರ್ಚೆಗಳು ಕೇಳಿಬರುತ್ತಿವೆ.

2015ರಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಪತ್ನಿ ರೇಖಾ ಎಚ್ ನಾಯಕ ಅವರು ಅಲ್ಪ ಮತಗಳ ಅಂತರದಿಂದ ಸೋಲು ಕಂಡರು, ಸೋಲಿನಿಂದ ಹಿಂದೆ ಸರಿಯದೆ ಕಾಂಗ್ರೆಸ್ ಪಕ್ಷದಲ್ಲಿ ರಾಜಕೀಯ ಚಟುವಟಿಕೆಗಳನ್ನು ಮುಂದುವರಿಸಿದರು. 2016ರಲ್ಲಿ ಬಂದಂತಹ ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಪ್ರಬಲ ಆಕಾಂಕ್ಷಿಯಾಗಿದ್ದರು. ಆದರೆ ಅಂದು ಪಕ್ಷದ ವರಿಷ್ಠರ ಮಾತಿಗೆ ಬೆಲೆ ನೀಡಿ ಸ್ಪರ್ಧೆಯಿಂದ ಹಿಂದಕ್ಕೆ ಸರಿದು, ತಮ್ಮ ಪಕ್ಷದ ಅಭ್ಯರ್ಥಿ ಗೆಲ್ಲಿಸಿಕೊಂಡು ಬಂದರು. 2020ರ ಗ್ರಾಮ ಪಂಚಾಯತ್ ಚುನಾವಣೆಯಲ್ಲಿ ಎಚ್. ಎಮ್.ನಾಯಕ ಅವರ ಕಾರ್ಯವೈಖರಿ, ಅಭಿವೃದ್ಧಿ ಕಂಡು ಪಕ್ಷದ ಮುಖಂಡರು ಮತ್ತೆ ಅವರ ಧರ್ಮಪತ್ನಿಯನ್ನು ಗ್ರಾಪಂ ಸದಸ್ಯೆಯಾಗಿ ಆಯ್ಕೆ ಮಾಡಿದರು. ನಂತರ ಬಂದಂತಹ ಕಾಕೋಳ ಗ್ರಾಪಂ ಉಪಾಧ್ಯಕ್ಷ ಸ್ಥಾನಕ್ಕೆ ಸಹ ಅವರನ್ನು ಆಯ್ಕೆ ಮಾಡುವ ಮೂಲಕ ಸ್ಥಳೀಯ ಆಡಳಿತದಲ್ಲಿ ಜನಪ್ರತಿನಿಧಿಯಾಗಿ ಸೇವೆ ಸಲ್ಲಿಸುವ ಅವಕಾಶ ಪಡೆದುಕೊಂಡರು.

ಎರಡನೇ ಪುಟಕ್ಕೆ...





ಬೆಳಕಿನ ಕಿರಣ ಬರಲಿಲ್ಲ

ಕಾಲದ ಕತ್ತಲೆಯು ನನ್ನ
ಹಾದಿಯನು ಅಡ್ಡಗಟ್ಟಿರಬಹುದು,
ವಿಧಿಯ ಆಟಕ್ಕೆ ನನ್ನ ಕನಸುಗಳು
ಕಣ್ಣೀರಿಟ್ಟಿರಬಹುದು...
ಆದರೇನು ಗೆಳೆಯಾ,
ಬೆಳಕಿನ ಕಿರಣ ಬರಲಿಲ್ಲವೆಂದು
ಬದುಕುವ ಭರವಸೆಯನು ಬಿಡಲು
ನನ್ನ ಒಡಲು ಒಪ್ಪುತ್ತಿಲ್ಲ!

ಬೀಳುತ್ತೇನೆ ಮತ್ತೆ ಮತ್ತೆ,
ಮೈಕೊಡವಿ ಏಳಲು ಯತ್ನಿಸುತ್ತೇನೆ.
ಬಿದ್ದರೂ ಮತ್ತೆ ಏಳುವ
ಹಠ ನನ್ನದು!

ಸೂರ್ಯ ಮುನಿದು,
ಕತ್ತಲು ಕವಿದು,
ಕರಗದ ಕರ್ಮೋಡ
ಎಲ್ಲಿಹುದು ಬೆಳಕಿನ ಕಿರಣ?

ವರ್ಷ ಉರುಳಿ
ಹರ್ಷ ಕರಗಿ,
ಕೊರಗಿ ಕೊರಗಿ ಹುಡುಕುತ್ತಿರುವೆ
ಕಾಲಗರ್ಭದಲಿ
ಅಡಗಿರುವ ಬೆಳಕನು!

ಹಣತೆಯ ಬೆಳಕಾದರೂ ಆಗಲಿ,
ನಕ್ಷತ್ರಗಳ ಹೊಳಪಾದರೂ ಆಗಲಿ,
ಬರಲಿ ಬೆಳಕು...

ಕತ್ತಲೆಯ ಬಣ್ಣ ಯಾವುದು ಎಂದು
ಹುಡುಕುತ್ತಲೇ ಇರುವೆ!
ಎಲ್ಲಿಹುದು ಬೆಳಕಿನ ಕಿರಣ?

ಇಂದಲ್ಲ ನಾಳೆ ಸಿಗಬಹುದೆಂಬ
ಅಚಲ ಭರವಸೆಯೊಂದಿಗೆ...

। ಮಾಲತೇಶ ಅಂಗೂರ, ಹಾವೇರಿ.



ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning

ಕಾಕೋಳ ಜಿಪಂ ಕ್ಷೇತ್ರದಲ್ಲಿ ನಾಯಕನ ರಾಜಕೀಯ ನಾಯಕತ್ವದ ಪರೀಕ್ಷೆ!

25 ವರ್ಷಗಳ ಕಾಂಗ್ರೆಸ್ ಸೇವೆ; ಈ ಬಾರಿ ಟಿಕೆಟ್ ನಿರೀಕ್ಷೆಯಲ್ಲಿ ಎಚ್.ಎಂ. ನಾಯಕ

ಮೊದಲನೇ ಪುಟದಿಂದ...



ಪಕ್ಷದ ನಿಷ್ಠೆ ನನ್ನ ಬದ್ಧತೆ, ಜನರ ವಿಶ್ವಾಸ ನನ್ನ ಗುರಿ

2000ರಲ್ಲಿ ಆರಂಭವಾದ ಅವರ ರಾಜಕೀಯ ಪಯಣ ಹಲವು ಏಳುಬೀಳುಗಳು, ಅನುಭವಗಳು ಹಾಗೂ ಜನರೊಂದಿಗಿನ ಒಡನಾಟದ ಮೂಲಕ ಸಾಗಿಬಂದಿದೆ. ಪಕ್ಷದ ಸಂಘಟನೆಗಾಗಿ ಸಾಧ್ಯವಾದಷ್ಟು ದುಡಿದಿದ್ದಾರೆ. ಇದೀಗ ಕಾಕೋಳ ಜಿಲ್ಲಾ ಪಂಚಾಯಿತಿ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಎಲ್ಲ ಸಮುದಾಯಗಳ ಹಿತಕ್ಕಾಗಿ ಜನಸೇವೆ ಮಾಡುವ ಸಂಕಲ್ಪ ಹೊಂದಿದ್ದಾರೆ. ಕಾಂಗ್ರೆಸ್ ಪಕ್ಷದ ಹಿರಿಯರು, ಮಾಜಿ ಶಾಸಕರಾದ ಕೆ.ಬಿ.ಕೋಳಿವಾಡ, ಸಚಿವರಾದ ರುದ್ರಪ್ಪ ಲಮಾಣಿ ಹಾಗೂ ಶಾಸಕರು ಹಾಗೂ ನಿಗಮ ಮಂಡಳಿ ಅಧ್ಯಕ್ಷರಾದ ಬಸವರಾಜ ಶಿವಣ್ಣನವರ, ಪ್ರಕಾಶ ಕೋಳಿವಾಡರ ಜತೆ ಉತ್ತಮ ಒಡನಾಟ ಹೊಂದಿರುವ ಅವರು ತಮ ಸೇವೆಯನ್ನು ಪರಿಗಣಿಸಿ ಈ ಬಾರಿ ಕಾಕೋಳ ಜಿಪಂ ಕ್ಷೇತ್ರಕ್ಕೆ ಅವಕಾಶ ನೀಡುವ ವಿಶ್ವಾಸವನ್ನು ಎಚ್.ಎಮ್. ನಾಯಕ ಅವರು ಹೊಂದಿದ್ದಾರೆ.

ಜಿಲ್ಲಾ ಪಂಚಾಯತಿ ಅಖಾಡದತ್ತ ಎಚ್.ಎಂ. ನಾಯಕ ಚಿತ್ತ

ಗ್ರಾಮ ಪಂಚಾಯಿತಿ ಮಟ್ಟದ ರಾಜಕೀಯ ಅನುಭವ ಹಾಗೂ ಪಕ್ಷದ ಸಂಘಟನೆಯೊಂದಿಗಿನ ಸುದೀರ್ಘ ಒಡನಾಟದ ಹಿನ್ನೆಲೆಯಲ್ಲಿ ಇದೀಗ ಕಾಕೋಳ ಜಿಲ್ಲಾ ಪಂಚಾಯಿತಿ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸುವ ಆಸಕ್ತಿ ಹೊಂದಿದ್ದಾರೆ. ಕಾಕೋಳ ಜಿಲ್ಲಾ ಪಂಚಾಯಿತಿ ಕ್ಷೇತ್ರದ ವ್ಯಾಪ್ತಿಯ ಗ್ರಾಮಗಳ ಅಭಿವೃದ್ಧಿ, ಮೂಲಸೌಕರ್ಯಗಳ ಸುಧಾರಣೆ, ಕುಡಿಯುವ ನೀರು, ರಸ್ತೆ, ಶಿಕ್ಷಣ, ಆರೋಗ್ಯ ಹಾಗೂ ರೈತರ ಸಮಸ್ಯೆಗಳಿಗೆ ಆದ್ಯತೆ ನೀಡುವ ಉದ್ದೇಶ ಹೊಂದಿರುವುದಾಗಿ ಅವರು ತಿಳಿಸಿದ್ದಾರೆ. ಕಳೆದ ಹಲವು ವರ್ಷಗಳಿಂದ ಪಕ್ಷದ ಕಾರ್ಯಕರ್ತನಾಗಿ ದುಡಿದ ಅನುಭವವನ್ನು ಮುಂದಿನ ಹಂತದ ಜನಸೇವೆಗೆ ಬಳಸಿಕೊಳ್ಳುವ ಆಶಯ ಅವರದ್ದಾಗಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಹಾಗೂ ವರಿಷ್ಠರು ತಮ್ಮ ರಾಜಕೀಯ ಸೇವೆ ಮತ್ತು ಅನುಭವವನ್ನು ಪರಿಗಣಿಸಿ ಅವಕಾಶ ನೀಡಬೇಕೆಂಬ ನಿರೀಕ್ಷೆಯಲ್ಲಿದ್ದಾರೆ.

ಎಲ್ಲರ ಬಾಳಲ್ಲಿ ಬೆಳಕನ್ನು ತರುವಂತಾಗಲಿ

ಹಾವೇರಿ: ಭಾರತ ಭವ್ಯ ಸಂಸ್ಕೃತಿ ಪರಂಪರೆಯ ದೇಶವಾಗಿದ,ದೀಪಾವಳಿ ಹಬ್ಬ ಎಲ್ಲರ ಬಾಳಲ್ಲಿ ಬೆಳಕನ್ನು ತರುವಂತಾಗಲಿ ಎಂದು ಉದ್ದಿಮಿಗಳು ಹಾಗೂ ಸಮಾಜ ಸೇವಕರಾದ ಪರಶುರಾಮ ಹರ್ಲಾಪುರ ಅವರು ಹೇಳಿದರು.

ನಗರದ ಶಶಿ ಟ್ರೇಡರ್ಸ್ ನಲ್ಲಿ ದೀಪಾವಳಿ ಹಬ್ಬದ ನಿಮಿತ್ತವಾಗಿ ವಿಮಲ್ ಪರಿವಾರ ವತಿಯಿಂದ ಲಕ್ಷ್ಮೀ ಪೂಜಾ ಕಾರ್ಯಕ್ರಮದಲ್ಲಿ ಭಾಗಿಯಾಗಿ ದೀಪಾವಳಿ ಹಬ್ಬದ ಶುಭ ಕೋರಿ ಅವರು ಮಾತನಾಡಿದರು.

ದೇಶದ ಜನತೆಗೆ ತನ್ನದೆಯಾದ ಸಂಪ್ರದಾಯ ಹಾಗೂ ಆಧ್ಯಾತ್ಮಿಕ ನೆಲೆಗಟ್ಟು ಇದ್ದು,ಎಲ್ಲ ಹಬ್ಬಗಳಿಗೂ ಪಾರಂಪರಿಕ ಹಿನ್ನೆಲೆಯಲ್ಲಿ ಆಚರಣೆ ಮಾಡಲಾಗುತ್ತಿದೆ. ಬೆಳಕಿನ ಈ ಹಬ್ಬ ಎಲ್ಲರ ಜೀವನದಲ್ಲಿ ಕಹಿ ಮರೆತು ಬೆಳಕಿನ ಹಾಗೆ ಬದುಕು ಉಜ್ವಲವಾಗಲಿ. ಈ ದಿನ ಶಶಿ ಟ್ರೇಡರ್ಸ್ ನಲ್ಲಿ ಕೆಲಸ ಮಾಡುವ ಎಲ್ಲಾ ಕಾರ್ಯವೃಂದದವರಿಗೆ ಸಿಹಿ ಹಾಗೂ ಉಡುಗೊರೆ ನೀಡುವ ಮೂಲಕ ಶ್ರಮಿಕರಿಗೆ ಗೌರವ ಸಲ್ಲಿಸುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಾ ಬರುತ್ತಿದ್ದೇವೆ.ಎಲ್ಲರಿಗೂ ಭಗವಂತ ಒಳ್ಳೆಯದು ಮಾಡಲಿ ಎಂದು ಪರಶುರಾಮ ಹರ್ಲಾಪುರ ಅವರು ದೀಪಾವಳಿ ಹಬ್ಬದ ಶುಭ ಕೋರಿದರು.ಈ ಸಂದರ್ಭದಲ್ಲಿ ವಿಮಲ ಪರಿವಾರದವರು,ಶಶಿ ಟ್ರೇಡರ್ಸ್ ಕಾರ್ಯವೃಂದದವರು ಪಾಲ್ಗೊಂಡಿದ್ದರು.



ಅನುಮತಿ ಪಡೆದು ಹೋರಿ ಬೆದರಿಸುವ ಸ್ಪರ್ಧೆ ಆಯೋಜನೆ ಮಾಡಿ

ಸಮಾಲೋಚನೆ ಸುದ್ದಿ ಬ್ಯಾಡಗಿ

ಹೋರಿ ಬೆದರಿಸುವ ಸ್ಪರ್ಧೆ ಅಥವಾ ಹೋರಿ ಹಬ್ಬ ಆಯೋಜಿಸುವ ಮುನ್ನ ಕಡ್ಡಾಯವಾಗಿ ತಾಲೂಕು ದಂಡಾಧಿಕಾರಿಗಳಿಂದ ಪೂರ್ವಾನುಮತಿ ಕಡ್ಡಾಯ. ಅಲ್ಲದೆ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನ ಹಾಗೂ ನಿರ್ಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಮತ್ತು ಪ್ರಾಣಿಗಳಿಗೆ ಯಾವುದೇ ರೀತಿಯ ಹಿಂಸೆ ನೀಡಬಾರದು ಎಂದು ಪಿಎಸ್ಐ ಭಾರತಿ ಕುರಿ ಹೇಳಿದರು.

ತಾಲೂಕಿನ ವಿವಿಧ ಗ್ರಾಮಗಳಿ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಮಾತನಾಡಿದ ಅವರು, ಗ್ರಾಮಗಳಲ್ಲಿ ಸಾಂಪ್ರದಾಯಿಕವಾಗಿ ಆಚರಿಸಿಕೊಂಡು ಬರುತ್ತಿರುವ ಹೋರಿ ಹಬ್ಬ ಹಾಗೂ ಹೋರಿ ಬೆದರಿಸುವ ಸ್ಪರ್ಧೆಗಳನ್ನು ಆಯೋಜಿಸುವ ಸಂದರ್ಭದಲ್ಲಿ ಕಾನೂನು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಯಾವುದೇ ಗ್ರಾಮದಲ್ಲಿ ಸ್ಪರ್ಧೆ ಆಯೋಜಿಸುವುದಾದರೆ ಆಯೋಜಕರು ಮುಂಚಿತವಾಗಿಯೇ ಮಾನ್ಯ ತಾಲೂಕು ದಂಡಾಧಿಕಾರಿಗಳಿಂದ ಅಗತ್ಯ ಅನುಮತಿ ಪಡೆದುಕೊಳ್ಳಬೇಕು ಎಂದರು.

ಪ್ರಾಣಿಗಳಿಗೆ ನೋವು ಕೊಡಬೇಡಿ: ಹೋರಿ ಹಬ್ಬದ ಸಂದರ್ಭದಲ್ಲಿ ಹೋರಿಗಳಿಗೆ ಅನಗತ್ಯವಾಗಿ ಹಿಂಸೆ ನೀಡುವುದು, ಅವುಗಳನ್ನು ಪ್ರಚೋದಿಸುವುದು, ನೋವುಂ ಟು ಮಾಡುವ ರೀತಿಯಲ್ಲಿ ವರ್ತಿಸುವುದು ಹಾಗೂ ಸಾರ್ವಜನಿಕರು ಮತ್ತು ಪ್ರಾಣಿಗಳ ಸುರಕ್ಷತೆಗೆ ಧಕ್ಕೆ ಉಂಟುಮಾಡುವ ಯಾವುದೇ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಸ್ಪರ್ಧೆಯ ವೇಳೆ ಸಾರ್ವಜನಿಕರ ಸುರಕ್ಷತೆ ಕಾಪಾಡಲು ಅಗತ್ಯ ಮುನ್ನೆ ಚ್ಚರಿಕೆ ಕ್ರಮಗಳನ್ನು



ಕೈಗೊಳ್ಳಬೇಕು. ನ್ಯಾಯಾಲಯದ ನಿರ್ದೇಶನಗಳನ್ನು ಉಲ್ಲಂಘಿಸದಂತೆ ಆಯೋಜಕರು ವಿಶೇಷ ಕಾಳಜಿ ವಹಿಸಬೇಕು ಎಂದು ಸೂಚಿಸಿದರು.

ಕಾನೂನು ಪಾಲಿಸಿ:ಸಂಪ್ರದಾಯ ಮತ್ತು ಸಂಭ್ರಮದ ಜೊತೆಗೆ ಪ್ರಾಣಿಗಳ ಹಿತಾಸಕ್ತಿ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನೂ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ, ಹಬ್ಬದ ಸಂಭ್ರಮದ ಹೆಸರಿನಲ್ಲಿ ಕಾನೂನು ಉಲ್ಲಂಘನೆಗೆ ಅವಕಾಶವಿಲ್ಲ. ಅನುಮತಿ ಪಡೆ ಯದೆ ಹೋರಿ ಹಬ್ಬ ಅಥವಾ ಸ್ಪರ್ಧೆ ಆಯೋಜಿಸುವುದು ಹಾಗೂ ನ್ಯಾಯಾಲಯದ ನಿಯಮಗಳನ್ನು ಉಲ್ಲಂಘಿಸುವುದು ಕಂಡು ಬಂದಲ್ಲಿ ಸಂಬಂಧಪಟ್ಟ ಆಯೋಜಕರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಈ ವೇಳೆ ಪಿಎಸ್ಐ ಎನ್. ಕೆ.ನಿಂಗೇನಹಳ್ಳಿ, ಎಎಸ್ಐ ಸಿ.ಎಂ.ಹುಡೇದ ಪೊಲೀಸ್ ಪೇದೆಗಳಾದ ಹನುಮಂತ ಬೆಳಕೇರಿ, ವಿಜಯ ದೇಸಾಯಿ, ಎಂ.ಜೆ.ಬಚ್ಚೇಗೌಡ್ರ, ಬಸವರಾಜ ಕೆಂಚನಗೌಡ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅರಮನೆ ವಶಕ್ಕೆ ಪಡೆಯಲು ಕಾರ್ಯಾಂಗ ದುರ್ಬಳಕೆ

ಮೈಸೂರು: ಮೈಸೂರು ರಾಜಮನೆತನ ಮತ್ತು ರಾಜ್ಯ ಸರ್ಕಾರದ ನಡುವಿನ ಸಂಘರ್ಷ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಇದೇ ಮೊದಲ ಬಾರಿಗೆ ರಾಜವಂಶಸ್ಥ ಹಾಗೂ ಬಿಜೆಪಿ ಸಂಸದ ಯದುವೀರ್ ಒಡೆಯರ್ ಅವರು ಸೋಮವಾರ ಪ್ರತಿಕ್ರಿಯಿಸಿದ್ದಾರೆ.

ಅರಮನೆ ಬೋರ್ಡ್ ಸರ್ಕಾರದ್ದು, ಅರಮನೆ ಜಾಗ ಸರ್ಕಾರದ್ದು. ಅವರು ಉಳಿದುಕೊಳ್ಳಲು ಒಂದಿಷ್ಟು ಜಾಗ ಕೊಟ್ಟಿದ್ದೇವೆ, ಅಷ್ಟೇ ಎಂದು ಸಚಿವ ಯತೀಂದ್ರ ಇತ್ತೀಚೆಗೆ ಹೇಳಿಕೆ ನೀಡಿದ್ದರು. ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದ ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರು, ಅರಮನೆ, ಅಂಬಾರಿ ಹಾಗೂ ಸಿಂಹಾಸನ ನಮ್ಮದು. ಸರ್ಕಾರ ಯದುವಂಶದ ವಾರಸುದಾರ ಅಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು.



ಇದೇ ಮೊದಲ ಬಾರಿಗೆ ಸರ್ಕಾರ – ರಾಜಮನೆತನ ನಡುವಿನ ಸಂಘರ್ಷದ ಬಗ್ಗೆ ಪ್ರತಿಕ್ರಿಯಿಸಿದ ಯದುವೀರ್ ಒಡೆಯರ್ ಅವರು, ಮೈಸೂರು ಅರಮನೆ ವಶಪಡಿಸಿಕೊಳ್ಳಲು ಕಾರ್ಯಾಂಗವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಈಗ ಅರಮನೆ ಆಸ್ತಿಯನ್ನು ವಶಕ್ಕೆ ಪಡೆಯಲು ಷಡ್ಯಂತ್ರ ನಡೆದಿದೆ ಎಂದು ಆರೋಪಿಸಿದರು.

ವೈಯಕ್ತಿಕ ಟೀಕೆಗಳು ಮತ್ತು ಆಸ್ತಿ ವಿಷಯಗಳು ಸಾರ್ವಜನಿಕ ಚರ್ಚೆಗೆ ಅಪ್ರಸ್ತುತವಾಗಿದ್ದು, ಇವುಗಳ ಕುರಿತು ನ್ಯಾಯಾಲಯದಲ್ಲಿ ತೀರ್ಮಾನವಾಗಬೇಕು. ನ್ಯಾಯಾಲಯದಲ್ಲಿನ ಕಾನೂನು ಪ್ರಕಾರದ ಆದೇಶವೇ ಅಂತಿಮ ಸತ್ಯ ಎಂದಿದ್ದಾರೆ.

ದಸರಾ ಮಹೋತ್ಸವದ ಕುರಿತು ಮಾತನಾಡಿ, ಈ ಬಾರಿಯ ದಸರಾ ಮುಗಿದಿದ್ದು, ಅದರ ಲೋಪಗಳ ಚರ್ಚೆಯನ್ನು ಮುಂದುವರಿಸುವ ಅಗತ್ಯವಿಲ್ಲ ಎಂದು ಅವರ ತಾಯಿ ಈಗಾಗಲೇ ಹೇಳಿದ್ದಾರೆ. ಆದಾಗ್ಯೂ, ಮುಂದಿನ ದಸರಾಗಳನ್ನು ಸುಧಾರಿಸುವ ದೃಷ್ಟಿಯಿಂದ ತಾವು ಕಾರ್ಯನಿರ್ವಹಿಸುವುದಾಗಿ ಯದುವೀರ್ ತಿಳಿಸಿದ್ದಾರೆ.

ದಸರಾದಿಂದ ರಾಜಕೀಯ ಲಾಭದ ನಿರೀಕ್ಷೆ ಇಲ್ಲ ಎಂದು ಹೇಳಿದ ಅವರು, ದಸರಾ ಯಶಸ್ವಿಯಾದರೆ ಮೈಸೂರಿಗೇ ಲಾಭ ಎಂದಿದ್ದಾರೆ.

ಅರಮನೆ ಆಸ್ತಿ ವಿವಾದಗಳು ಸುಪ್ರೀಂ ಕೋರ್ಟ್‌ನಲ್ಲಿರುವುದರಿಂದ, ನ್ಯಾಯಾಲಯದ ತೀರ್ಮಾನದ ನಂತರವೇ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವುದಾಗಿ ಒಡೆಯರ್ ತಿಳಿಸಿದ್ದಾರೆ.

ಬೆಳಕಿನ ಹಬ್ಬ ದೀಪಾವಳಿ: ಸಂಭ್ರಮ, ಸಂಸ್ಕೃತಿ, ಆಧ್ಯಾತ್ಮಿಕ ಮಹತ್ವ

ಭಾರತೀಯರ ಅತಿ ದೊಡ್ಡ ಹಾಗೂ ಅತ್ಯಂತ ಸಡಗರದ ಹಬ್ಬಗಳಲ್ಲಿ ದೀಪಾವಳಿಯು ಅಗ್ರಸ್ಥಾನದಲ್ಲಿದೆ. ಕತ್ತಲೆಯನ್ನು ಓಡಿಸಿ ಬೆಳಕನ್ನು ತರುವ ಈ ಹಬ್ಬವು ದೇಶಾದ್ಯಂತ ಜಾತಿ, ಧರ್ಮ, ಭಾಷೆಯ ಗಡಿಗಳನ್ನು ಮೀರಿ ಅತ್ಯಂತ ಉತ್ಸಾಹದಿಂದ ಆಚರಿಸಲ್ಪಡುತ್ತದೆ. ತಮಸೋ ಮಾ ಜ್ಯೋತಿರ್ಗಮಯ& (ಕತ್ತಲೆಯಿಂದ ಬೆಳಕಿನೆಡೆಗೆ ಸಾಗು) ಎಂಬ ಧ್ಯೇಯದೊಂದಿಗೆ ಪ್ರತಿ ಮನೆಯೂ ಹಣತೆಗಳ ಬೆಳಕಿನಿಂದ ಕಂಗೊಳಿಸುತ್ತದೆ.

ದೀಪಾವಳಿಯ ಆಚರಣೆಯ ಹಿಂದೆ ಹಲವಾರು ಪ್ರಮುಖ ಪೌರಾಣಿಕ **ಕಥೆಗಳಿವೆ:** ಶ್ರೀರಾಮನ ಅಯೋಧ್ಯೆ ಪ್ರವೇಶ: ಹದಿನಾಲ್ಕು ವರ್ಷಗಳ ವನವಾಸವನ್ನು ಮುಗಿಸಿ, ರಾವಣನನ್ನು ಸಂಹರಿಸಿ ಅಯೋಧ್ಯೆಗೆ ಶ್ರೀರಾಮಚಂದ್ರನು ಸೀತಾದೇವಿ ಮತ್ತು ಲಕ್ಷ್ಮಣನೊಂದಿಗೆ ಮರಳಿದ ದಿನವನ್ನು ಅಯೋಧ್ಯೆಯ ಜನರು ತುಪ್ಪದ ದೀಪಗಳನ್ನು ಹಚ್ಚಿ ಸ್ವಾಗತಿಸಿದರು.

ನರಕಾಸುರ ಸಂಹರಣೆ: ಶ್ರೀಕೃಷ್ಣನು ನರಕಾಸುರನೆಂಬ ರಾಕ್ಷಸನನ್ನು ವಧಿಸಿದ ನೆನಪಿಗಾಗಿ ನರಕ ಚತುರ್ದಶಿಯನ್ನು ಆಚರಿಸಲಾಗುತ್ತದೆ. ಇದು ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯದ ಪ್ರತೀಕ.

ಲಕ್ಷ್ಮಿ ಪೂಜೆ: ದೀಪಾವಳಿಯ ಅಮಾವಾಸ್ಯೆಯ ದಿನದಂದು ಸಂಪತ್ತಿನ ದೇವತೆಯಾದ ಮಹಾಲಕ್ಷ್ಮಿ ಹಾಗೂ ವಿಘ್ನಹರ್ತ ಶ್ರೀ ಗಣೇಶನನ್ನು ಪೂಜಿಸುವುದರಿಂದ ಮನೆಗೆ ಐಶ್ವರ್ಯ ಮತ್ತು ಸಮೃದ್ಧಿ ನೆಲೆಸುತ್ತದೆ ಎಂಬ ಬಲವಾದ ನಂಬಿಕೆಯಿದೆ.

ಆಚರಣೆಯ ವಿವಿಧ ದಿನಗಳು:

ದೀಪಾವಳಿಯು ಕೇವಲ ಒಂದು ದಿನದ ಹಬ್ಬವಲ್ಲ, ಇದು ಐದು ದಿನಗಳ **ಸಡಗರ:** ಧನತೇರಸ್: ಚಿನ್ನ, ಬೆಳ್ಳಿ ಅಥವಾ ಹೊಸ ಪಾತ್ರೆಗಳನ್ನು ಖರೀದಿಸುವುದು ಮಂಗಳಕರವೆಂದು ಭಾವಿಸುವ ದಿನ.

ನರಕ ಚತುರ್ದಶಿ: ಮುಂಜಾನೆ ಎಣ್ಣೆ ಸ್ನಾನ ಮಾಡಿ ಪಟಾಕಿ ಸಿಡಿಸಿ ಸಂಭ್ರಮಿಸುವ ದಿನ.

ದೀಪಾವಳಿ ಅಮಾವಾಸ್ಯೆ: ಲಕ್ಷ್ಮಿ ಪೂಜೆ ಮತ್ತು ಮನೆಗಳ ಮುಂದೆ ಬಣ್ಣಬಣ್ಣದ



ರಂಗೋಲಿ ಹಾಗೂ ಹಣತೆಗಳ ಅಂದ.

ಬಲಿಪಾಡ್ಯಮಿ/ವರ್ಷಪ್ರತಿಪದೆ (ಗೋವರ್ಧನ ಪೂಜೆ): ಗೋವರ್ಧನ ಪರ್ವತವನ್ನು ಪೂಜಿಸುವ ಮತ್ತು ಬಲಿರಾಜನನ್ನು ಸ್ಮರಿಸುವ ದಿನ.

ಭಾಯ್ ದೂಜ್ (ಯಮ ದ್ವಿತೀಯಾ): ಅಣ್ಣ–ತಂಗಿಯರ ಬಾಂಧವ್ಯವನ್ನು ಗಟ್ಟಿಗೊಳಿಸುವ ಹಬ್ಬ. ಆಧುನಿಕ ಯುಗದಲ್ಲಿ ದೀಪಾವಳಿಯ ಸಂದೇಶ. ಇಂದಿನ ಧಾವಂತದ ಬದುಕಿನಲ್ಲಿ ದೀಪಾವಳಿಯು ನಾವೆಲ್ಲರೂ ನಮ್ಮ ಕುಟುಂಬ ಮತ್ತು

ಸ್ನೇಹಿತರೊಂದಿಗೆ ಒಂದೆಡೆ ಸೇರಲು ಸಿಕ್ಕಿರುವ ಸುಂದರ ಅವಕಾಶ. ಪಟಾಕಿಗಳ ಅತಿಮೂರು ಶಬ್ದ ಹಾಗೂ ವಾಯುಮಾಲಿನ್ಯವನ್ನು ಕಡಿಮೆ ಮಾಡಿ, ಪರಿಸರ ಸ್ನೇಹಿಯಾಗಿ ದೀಪಾವಳಿಯನ್ನು ಆಚರಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ಮಣ್ಣಿನ ಹಣತೆಗಳನ್ನು ಹಚ್ಚುವುದರಿಂದ ಸ್ಥಳೀಯ ಕುಂಬಾರರಿಗೆ ಪ್ರೋತ್ಸಾಹ ಸಿಗುವುದಲ್ಲದೆ, ನಮ್ಮ

ಸಾಂಪ್ರದಾಯಿಕ ಕಲೆಗೆ ಜೀವ ತುಂಬಿದಂತಾಗುತ್ತದೆ. ದೀಪಾವಳಿಯ ನಿಜವಾದ ಬೆಳಕು ಕೇವಲ ಹೊರಗಿನ ಮನೆಗಳಲ್ಲಿ ಮಾತ್ರವಲ್ಲ, ನಮ್ಮ ಒಳಗಿನ ಮನಸ್ಸಿನ ಮೂಲೆಗಳಲ್ಲಿರುವ ಅಜ್ಞಾನದ ಕತ್ತಲೆಯನ್ನು ಹೋಗಲಾಡಿಸಲಿ. ಪ್ರತಿಯೊಬ್ಬರ ಬದುಕಿನಲ್ಲಿಯೂ ಸುಖ, ಶಾಂತಿ ಮತ್ತು ಸಮೃದ್ಧಿಯ ದೀಪಗಳು ಸದಾ ಬೆಳಗಲಿ.

ಕರ್ನಾಟಕದಲ್ಲಿ ದೀಪಾವಳಿ ಸಡಗರ: ಕರ್ನಾಟಕದಲ್ಲಿ ದೀಪಾವಳಿ ಹಬ್ಬವನ್ನು ಅತ್ಯಂತ ವಿಭಿನ್ನವಾಗಿ ಹಾಗೂ ಆಚರಣೆಗಳ ಶ್ರೀಮಂತಿಕೆಯೊಂದಿಗೆ ಆಚರಿಸಲಾಗುತ್ತದೆ. ಇಲ್ಲಿನ ಸಂಪ್ರದಾಯಗಳು ಕೇವಲ ದೀಪ ಹಚ್ಚುವುದಕ್ಕೆ ಮಾತ್ರ ಸೀಮಿತವಾಗಿರದೆ, ಕೃಷಿ ಸಂಸ್ಕೃತಿ ಮತ್ತು ಪೌರಾಣಿಕ ನಂಬಿಕೆಗಳೊಂದಿಗೆ ಆಳವಾಗಿ ಬೆಸೆದುಕೊಂಡಿವೆ. ಕರ್ನಾಟಕದ ದೀಪಾವಳಿಯ ಪ್ರಮುಖ ವಿಶೇಷ ಪದ್ಧತಿಗಳು ಮತ್ತು ಸಂಪ್ರದಾಯಗಳು ಇಲ್ಲಿವೆ:

1. ನೀರು ತುಂಬುವ ಹಬ್ಬ (ಜಲಪೂರ್ಣ ತ್ರಯೋದಶಿ): ದೀಪಾವಳಿಯ ಮುನ್ಸೂಚನೆಯಾಗಿ ಆಶ್ವಯುಜ ಮಾಸದ ಕೃಷ್ಣ ಪಕ್ಷದ ತ್ರಯೋದಶಿಯಂದು ನೀರು ತುಂಬುವ ಹಬ್ಬ ಆಚರಿಸಲಾಗುತ್ತದೆ. ಅಂದು ಸಂಜೆ ತಾಮ್ರ ಅಥವಾ ಪಿತ್ತಳೆಯ ಹೊಸ ಪಾತ್ರೆಗಳನ್ನು (ಹಂಡೆ/ಚೊಂಬು) ಚೆನ್ನಾಗಿ ತೊಳೆದು, ಹೂವುಗಳಿಂದ ಅಲಂಕರಿಸಿ, ಗಂಗಾ ದೇವಿಯನ್ನು ಸ್ಮರಿಸುತ್ತ ಮನೆಯಲ್ಲಿ ಶುದ್ಧ ನೀರನ್ನು ತುಂಬಿಸಿಡಲಾಗುತ್ತದೆ. ಈ ನೀರಿಗೆ ಕೆಲವೆಡೆ ಔಷಧೀಯ ಎಲೆಗಳು ಅಥವಾ ಅರಿಶಿನ–ಕುಂಕುಮವನ್ನು ಹಾಕಲಾಗುತ್ತದೆ. ಮರುದಿನ ನರಕ ಚತುರ್ದಶಿಯಂದು ಅಭ್ಯಂಜನ ಸ್ನಾನಕ್ಕೆ (ಎಣ್ಣೆ ಸ್ನಾನ) ಈ ನೀರನ್ನು ಬಳಸುವುದು ಇಲ್ಲಿನ ವಿಶೇಷ ಸಂಪ್ರದಾಯ.



ಲೇಖಕರು: – ರಾಚಯ್ಯ(ರಘು) ಎಸ್ ಹಿರೇಮಠ ಶಿಕ್ಷಕರು ಜುಮಖಂಡಿ

2. ನರಕ ಚತುರ್ದಶಿ ಮತ್ತು ಎಣ್ಣೆ ಸ್ನಾನ (ಅಭ್ಯಂಜನ): ದೀಪಾವಳಿಯ ಅತ್ಯಂತ ಮುಖ್ಯ ದಿನ ನರಕ ಚತುರ್ದಶಿ. ಅಂದು ಸೂರ್ಯೋದಯಕ್ಕೂ ಮುನ್ನವೇ (ಬ್ರಾಹ್ಮಿ ಮುಹೂರ್ತದಲ್ಲಿ) ಮನೆಯ ಎಲ್ಲರೂ ಎಣ್ಣೆ ಮತ್ತು ಸೀಗೆಕಾಯಿಯನ್ನು ಬಳಸಿ ಎಣ್ಣೆ ಸ್ನಾನ ಮಾಡುತ್ತಾರೆ. ಎಣ್ಣೆಯಲ್ಲಿ ಲಕ್ಷ್ಮಿ ಮತ್ತು ಗಂಗೆಯರು ನೆಲೆಸಿರುತ್ತಾರೆ&ಡಣಠಣ; ಎಂಬ ನಂಬಿಕೆಯಿದೆ. ಸ್ನಾನದ ನಂತರ ಹೊಸ ಬಟ್ಟೆಗಳನ್ನು ಧರಿಸಿ, ಹಿರಿಯರ ಆಶೀರ್ವಾದ ಪಡೆದು ಪಟಾಕಿ ಸಿಡಿಸಿ ಸಂಭ್ರಮಿಸುತ್ತಾರೆ. ಮನೆಯ ಹಿರಿಯರು ಅಥವಾ ತಾಯಂದಿರು ಕುಟುಂಬದ ಎಲ್ಲ ಸದಸ್ಯರಿಗೆ ಆರತಿ ಬೆಳಗಿ (ನೀರಕುತ ನೀರಾಜನ) ದೃಷ್ಟಿ ತೆಗೆಯುತ್ತಾರೆ.

3. ಆಕಾಶ ದೀಪ (ಆಕಾಶ ಬುಟ್ಟಿ): ದೀಪಾವಳಿ ಪೂರ್ತಿ (ವಿಶೇಷವಾಗಿ ಅಮಾವಾಸ್ಯೆ ದಿನಗಳಲ್ಲಿ) ಪ್ರತಿಯೊಬ್ಬರ ಮನೆಯ ಮೇಲ್ಛಾವಣಿಯಲ್ಲಿ ಅಥವಾ ಮುಖಮಂಟಪದಲ್ಲಿ ಎತ್ತರದ ಜಾಗದಲ್ಲಿ ಆಕಾಶ ದೀಪವನ್ನು (ಬಣ್ಣಬಣ್ಣದ ಆಕಾಶ

SAMALOCHANE RANEBENNURSUDDI
Kannada Daily Morning

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ

ಮಂಗಳವಾರ 10 ನವೆಂಬರ್ 2026
10 NOVEMBER 2026

ಹಸಿ ಮೆಣಸಿನಕಾಯಿ ಬೆಳೆ ವಿಮೆಗೆ ನ. 16 ಕೊನೆಯ ದಿನ

ಕೊಪ್ಪಳ : 2026–27ನೇ ಸಾಲಿನ ಹಿಂಗಾರು ಹಂಗಾಮಿನ ಮರುವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ (ಖ–ಘಃಅಖಖ) ಅಡಿಯಲ್ಲಿ ಹಸಿ ಮೆಣಸಿನಕಾಯಿ ಬೆಳೆ ಬೆಳೆದ ರೈತರು ಬೆಳೆ ವಿಮೆ ನೋಂದಣಿ ಮಾಡಿಸಲು ನವೆಂಬರ್ 16 ಕೊನೆಯ ದಿನವಾಗಿದೆ ಎಂದು ತೋಟಗಾರಿಕೆ ಜಂಟಿ ನಿರ್ದೇಶಕರಾದ ಕೃಷ್ಣ ಉಕ್ಕುಂದ ಅವರು ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲೆಯ ರೈತರು ಯಾವುದೇ ಮಧ್ಯವರ್ತಿಗಳನ್ನು ಸಂಪರ್ಕಿಸದೆ,ಖುದ್ದಾಗಿಜಮೀನಿಗೆಸಂಬಂಧಿಸಿದದಾಖಲೆಗಳು ಹಾಗೂ ಆಧಾರ್ ಕಾರ್ಡ್ಗೆ ಲಿಂಕ್ ಆಗಿರುವ ಮೊಬೈಲ್ನೊಂದಿಗೆ ಸಮೀಪದ ಗ್ರಾಹಕರ ಸೇವಾ ಕೇಂದ್ರ,ಗ್ರಾಮ ಒನ್ ಅಥವಾ ಇತರೆ ನೋಂದಣಿ ಕೇಂದ್ರಗಳಿಗೆ ಭೇಟಿ ನೀಡಿ ಬೆಳೆ ವಿಮೆ ನೋಂದಣಿ ಮಾಡಿಸಿಕೊಳ್ಳಬಹುದು.

ಪ್ರತಿ ಹೆಕ್ಟೇರ್ಗೆ ರೈತರು ರೂ. 3,550 ವಿಮಾ ಕಂತಿನ ವಂತಿಗೆ ಪಾವತಿಸಬೇಕಾಗುತ್ತದೆ. ಈ ಯೋಜನೆಯಡಿ ವಿಮಾ ಸೌಲಭ್ಯ ಪಡೆಯಲು ರೈತರು ಕಡ್ಡಾಯವಾಗಿ ಹಸಿ ಮೆಣಸಿನಕಾಯಿ ಬೆಳೆದಿರಬೇಕು. ಬೆಳೆ ವಿಮಾ ಯೋಜನೆಯ ಅನುಷ್ಠಾನಕ್ಕಾಗಿ ಆಗ್ರಿಕಲ್ಚರ್ ಇನ್ಶೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್ ಆಯ್ಕೆಯಾಗಿದ್ದು, ರೈತರು ನಿಗದಿತ ದಿನಾಂಕದೊಳಗೆ ವಿಮೆ ನೋಂದಣಿ ಮಾಡಿಸಿಕೊಂಡು ಯೋಜನೆಯ ಸೌಲಭ್ಯ ಪಡೆದುಕೊಳ್ಳಬೇಕು ಎಂದು ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶೇ. 50ರಷ್ಟು ಸಹಾಯಧನದಲ್ಲಿ ಪಿವಿಸಿ ಪೈಪ್ ವಿತರಣೆ

ಕೊಪ್ಪಳ: ಜಿಲ್ಲೆಯಾದ್ಯಂತ ಬರಗಾಲದ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಲಭ್ಯವಿರುವ ನೀರಿನ ಸಂಪನ್ಮೂಲಗಳನ್ನು ಮಿತವಾಗಿ ಹಾಗೂ ಸಮರ್ಪಕವಾಗಿ ಬಳಸಿಕೊಳ್ಳಲು ಕೃಷಿ ಇಲಾಖೆಯ ವತಿಯಿಂದ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ (ಇತರೆ ಉಪಚಾರ) ರೈತರಿಗೆ ಶೇ. 50ರಷ್ಟು ಸಹಾಯಧನದಲ್ಲಿ ಪಿವಿಸಿ ಪೈಪ್ಗಳನ್ನು ವಿತರಿಸಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕೃಷಿ ಬೆಳೆಗಳಿಗೆ ಲಭ್ಯವಿರುವ ನೀರನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದು ಹಾಗೂ ನೀರಿನ ಸಾಗಾಣಿಕೆ ಸಂದರ್ಭದಲ್ಲಿ ಉಂಟಾಗುವ ನೀರಿನ ನಷ್ಟವನ್ನು ಕಡಿಮೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.


ಯೋಜನೆಯ ಸೌಲಭ್ಯ ಪಡೆಯಲು ಆಸಕ್ತ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ, ರೈತ ಗುರುತಿನ ಸಂಖ್ಯೆ (ಎಫ್ಐಡಿ) ಸೇರಿದಂತೆ ಅಗತ್ಯ ಮಾಹಿತಿಯನ್ನು ಒದಗಿಸಬೇಕು. ಯೋಜನೆಯಡಿ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳು ಹಾಗೂ ನಿಯಮಗಳನ್ವಯ ಶೇ. 50ರಷ್ಟು ಸಹಾಯಧನದಲ್ಲಿ ಪಿವಿಸಿ ಪೈಪ್ಗಳ ಸೌಲಭ್ಯ ಪಡೆಯಬಹುದಾಗಿದೆ ಎಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಪ್ರಕಟಣೆ ತಿಳಿಸಿದೆ.

ಭಾರತದ ಸಂವಿಧಾನ ದೇಶದ ಭವಿಷ್ಯದ ಮಾರ್ಗಸೂಚಿ: ಡಾ. ನಿಂಗಪ್ಪ ಕಂಬಳಿ

ಕೊಪ್ಪಳ: ಭಾರತದ ಸಂವಿಧಾನ ಕೇವಲ ಒಂದು ಪುಸ್ತಕವಲ್ಲ, ಅದು ದೇಶದ 140 ಕೋಟಿ ಜನರ ಆಶೋತ್ತರಗಳ ಪ್ರತಿಬಿಂಬ ಹಾಗೂ ದೇಶದ ಭವಿಷ್ಯದ ಮಾರ್ಗಸೂಚಿಯಾಗಿದೆ ಎಂದು ಹಿಟ್ನಾಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ನಿಂಗಪ್ಪ ಕಂಬಳಿ ಅವರು ಅಭಿಪ್ರಾಯಪಟ್ಟರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದಲ್ಲಿನ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ 'ಡಾ. ಬಿ.ಆರ್. ಅಂಬೇಡ್ಕರ್ ಓದು' ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ನಮ್ಮ ದೇಶಕ್ಕೆ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರು ನೀಡಿರುವ ಈ ಅಮೂಲ್ಯ ಸಂವಿಧಾನವು ಭಾರತವನ್ನು ಏಕತೆ, ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಹಾದಿಯಲ್ಲಿ ಮುನ್ನಡೆಸುವ ದಿಕ್ಸೂಚಿಯಾಗಿದೆ. ಸಂವಿಧಾನದ ಮೌಲ್ಯಗಳನ್ನು ಅರಿತು ಅದನ್ನು



ರಕ್ಷಿಸುವುದು ಪ್ರತಿಯೊಬ್ಬ ಭಾರತೀಯನ ಆದ್ಯ ಕರ್ತವ್ಯ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಅಂಬೇಡ್ಕರ್ ರವರ ಜೀವನ ಚರಿತ್ರೆ, ಶಿಕ್ಷಣಕ್ಕಾಗಿ ಅವರು ನಡೆಸಿದ ಹೋರಾಟ ಮತ್ತು ಸಮಾಜ ಸುಧಾರಣೆಗೆ ನೀಡಿದ ಅಪಾರ ಕೊಡುಗೆಗಳನ್ನು ಸ್ಮರಿಸಿದರು.

ಬಹುಮಾನವಾಗಿ ವಿತರಣೆ: ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದ್ದ ಆಶುಭಾಷಣ ಸ್ಪರ್ಧೆಯ ವಿಜೇತರಿಗೆ ಪುಸ್ತಕಗಳನ್ನು ಬಹುಮಾನವಾಗಿ ವಿತರಿಸಲಾಯಿತು. ವೇದಿಕೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ್, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದು.ಆರ್.ಶಿವಾನಂದ್,ಉಪನ್ಯಾಸಕರಾದ ಎಸ್.ವಿ. ಮೇಳಿ, ಉಮಾ ಜೋಶಿ ಹಾಗೂ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಯುವಜನರಲ್ಲಿ ಸಂವಿಧಾನದ ಮಹತ್ವ ಮತ್ತು ಅರಿವು ಮೂಡಿಸುವಲ್ಲಿ ಈ ಕಾರ್ಯಕ್ರಮ ಯಶಸ್ವಿಯಾಯಿತು.

ವಕೀಲರ ಮೇಲಿನ ಹಲ್ಲೆ ಖಂಡಿಸಿ ಕುಷ್ಟಗಿಯಲ್ಲಿ ಕೋರ್ಟ್ ಕಲಾಪ ಬಹಿಷ್ಕಾರ, ಪ್ರತಿಭಟನೆ

ಕುಷ್ಟಗಿ: ಧಾರವಾಡ ಹಾಗೂ ದಾವಣಗೆರೆಯಲ್ಲಿ ವಕೀಲರ ಮೇಲೆ ನಡೆದ ಹಲ್ಲೆ ಘಟನೆಗಳನ್ನು ಖಂಡಿಸಿ ಕುಷ್ಟಗಿ ತಾಲೂಕು ವಕೀಲರ ಸಂಘದ ವತಿಯಿಂದ ಪಟ್ಟಣದಲ್ಲಿ ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿ ಮಾನವ ಸರಪಳಿ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ವಕೀಲರ ಸಂಘಟನೆಯ ಸೂಚನೆಯ ಮೇರೆಗೆ ವಕೀಲರ ಸಂಘದ ಅಧ್ಯಕ್ಷ ಎಚ್.ಆರ್. ನಾಯಕ ಅವರ ನೇತೃತ್ವದಲ್ಲಿ ನೂರಾರು ವಕೀಲರು ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದು ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಹಲ್ಲೆ ಘಟನೆಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.

ವಕೀಲರ ಮೇಲೆ ಹಲ್ಲೆ ಹಾಗೂ ದೌರ್ಜನ್ಯ ನಡೆಸಿದ ಪ್ರಕರಣಗಳಿಗೆ ಸಂಬಂಧಿಸಿದ ಆರೋಪಿಗಳನ್ನು ಕೂಡಲೇ ಬಂಧಿಸಬೇಕು. ಪ್ರಕರಣಗಳ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರೆಂದು ಸಾಬೀತಾದವರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ವಕೀಲರು ನಿರ್ಭೀತಿಯಿಂದ ತಮ್ಮ ವೃತ್ತಿ ನಿರ್ವಹಿಸಲು ಅಗತ್ಯ ರಕ್ಷಣೆ ಒದಗಿಸಬೇಕು. ಇಂತಹ ಹಲ್ಲೆ ಘಟನೆಗಳು ಮರುಕಳಿಸದಂತೆ ಸರ್ಕಾರ ಸೂಕ್ತ ಕಾನೂನು ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಪಟ್ಟಣದ ಪ್ರಮುಖ ವೃತ್ತವಾದ ಬಸವೇಶ್ವರ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದ ಪರಿಣಾಮ ಕೆಲಕಾಲ ವಾಹನ ಸಂಚಾರದಲ್ಲಿ ವ್ಯತ್ಯಯ ಉಂಟಾಗಿ ಸಾರ್ವಜನಿಕರಿಗೆ ಅಡಚಣೆಯಾಯಿತು.

ಪ್ರತಿಭಟನೆಯ ಬಳಿಕ ವಕೀಲರು ತಹಸೀಲ್ದಾರ್ ಕಚೇರಿಗೆ ತೆರಳಿ ಗ್ರೇಡ್–2 ತಹಸೀಲ್ದಾರ್ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.



ಬಾದಿಮನಾಳ ಕ್ರಾಸ್ ರೈತರ ಹೋರಾಟಕ್ಕೆ ಜಯ!

ಶಾಸಕರ ಲಿಖಿತ ಭರವಸೆ ಬೆನ್ನಲ್ಲೇ ಪ್ರತಿಭಟನೆ ತಾತ್ಕಾಲಿಕ ವಾಪಸ್
। ಕೆರೆಗಳಿಗೆ ನೀರು ಹರಿಸಲು ಅಧಿಕಾರಿಗಳ ಕ್ರಮ

ಕುಷ್ಟಗಿ: ಕೆರೆಗಳಿಗೆ ನೀರು ತುಂಬಿಸುವಂತೆ ಆಗ್ರಹಿಸಿ ರೈತರು ನಡೆಸುತ್ತಿದ್ದ ಅನಿರ್ದಿಷ್ಟಾವಧಿ ಹೋರಾಟಕ್ಕೆ ಕೊನೆಗೂ ಸ್ಪಂದನೆ ಸಿಕ್ಕಿದೆ. ಶಾಸಕ ದೊಡ್ಡನಗೌಡ ಪಾಟೀಲ್ ಅವರ ಲಿಖಿತ ಭರವಸೆ ಹಾಗೂ ನೀರಾವರಿ ಅಧಿಕಾರಿಗಳ ಕ್ರಮದ ಹಿನ್ನೆಲೆಯಲ್ಲಿ ಬಾದಿಮನಾಳ ಕ್ರಾಸ್ನಲ್ಲಿ ನಡೆಯುತ್ತಿದ್ದ ರೈತರ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಗಿದೆ.

ಬಾದಿಮನಾಳ, ಮಾವಿನಇಟಗಿ ಹಾಗೂ ಜಹಾಂಗೀರ ಗುಡದೂರು ಕೆರೆಗಳಿಗೆ ತಕ್ಷಣ ನೀರು ಹರಿಸಬೇಕೆಂದು ಆಗ್ರಹಿಸಿ ನವೆಂಬರ್ 2ರಿಂದ ರೈತರು ಬಾದಿಮನಾಳ ಕ್ರಾಸ್ನಲ್ಲಿ ಶಾಮಿಯಾನ ಹಾಕಿ ರಸ್ತೆ ತಡೆ ನಡೆಸಿ ಅನಿರ್ದಿಷ್ಟಾವಧಿ ಹೋರಾಟ ಆರಂಭಿಸಿದ್ದರು. ಕೆರೆಗಳಿಗೆ ನೀರು ತಲುಪುವವರೆಗೆ ಹೋರಾಟ ಕೈಬಿಡುವುದಿಲ್ಲ ಎಂದು ಪಟ್ಟು ಹಿಡಿದಿದ್ದರು.

ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಶಾಸಕ ದೊಡ್ಡನಗೌಡ ಪಾಟೀಲ್, ನೀರಾವರಿ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ರೈತರೊಂದಿಗೆ ಮಾತುಕತೆ ನಡೆಸಿದರು.

ಕೃಷ್ಣಾ ನದಿ ನೀರು ಸಾಗಿಸುವ ಪೈಪ್ಲೈನ್ ಮಾರ್ಗಮಧ್ಯೆ ಕೆಲವರು ವಾಲ್ವ್ಗಳನ್ನು ತಿರುಗಿಸಿ ನೀರು ಪಡೆಯುತ್ತಿರುವುದರಿಂದ ಕೆರೆಗಳಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ ಎಂಬ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ರೈತರ ಮನವೊಲಿಸಿ ವಾಲ್ವ್ಗಳನ್ನು ಬಂದ್ ಮಾಡಿಸುವ ಮೂಲಕ ಕೆರೆಗಳಿಗೆ ನೀರು ಹರಿಸಲು ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

ಶಾಸಕರ ಲಿಖಿತ ಭರವಸೆ ಹಾಗೂ ಅಧಿಕಾರಿಗಳ ಕ್ರಮದಿಂದ ತೃಪ್ತರಾದ ರೈತ ಮುಖಂಡರು ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆದಿದ್ದಾರೆ. ಆದರೆ, ಮುಂದಿನ ದಿನಗಳಲ್ಲಿ ಮತ್ತೆ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ಯಾವುದೇ ಮುನ್ಸೂಚನೆ ನೀಡದೆ ಉಗ್ರ ಹೋರಾಟ ನಡೆಸಲಾಗುವುದು ಎಂದು ರೈತ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಕೆರೆಗಳಿಗೆ ನೀರು ಹರಿಸುವಂತೆ ರೈತರ ಹೋರಾಟಕ್ಕೆ ಸದ್ಯಕ್ಕೆ ಸ್ಪಂದನೆ ಸಿಕ್ಕಿದ್ದು, ಭರವಸೆ ಎಷ್ಟರಮಟ್ಟಿಗೆ ಕಾರ್ಯರೂಪಕ್ಕೆ ಬರುತ್ತದೆ ಎಂಬುದನ್ನು ಕಾದು ನೋಡಬೇಕಿದೆ.



ಪರಿಸರ ಸ್ನೇಹಿ, ದೀಪಾವಳಿ ಆಚರಣೆಗೆ ಕೊಪ್ಪಳ ಜಿಲ್ಲಾಡಳಿತದ ಮಾರ್ಗಸೂಚಿ

ಕೊಪ್ಪಳ: ನಾಡಿನಾದ್ಯಂತ ಸಂಭ್ರಮದಿಂದ ಆಚರಿಸಲಾಗುವ ಬೆಳಕಿನ ಹಬ್ಬ ದೀಪಾವಳಿಯನ್ನು ಯಾವುದೇ ಅನಾಹುತಗಳಾಗದಂತೆ ಅತ್ಯಂತ ಸುರಕ್ಷಿತವಾಗಿ, ಜಾಗರೂಕತೆಯಿಂದ ಮತ್ತು ಪರಿಸರಸ್ನೇಹಿಯಾಗಿ ಆಚರಿಸಲು ಕೊಪ್ಪಳ ಜಿಲ್ಲಾಡಳಿತವು ಸಾರ್ವಜನಿಕರಿಗೆ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯ, ಉಚ್ಚ ನ್ಯಾಯಾಲಯ, ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ (ಎನ್.ಜಿ.ಟಿ) ಹಾಗೂ ರಾಜ್ಯ ಸರ್ಕಾರದ ಸುತ್ತೋಲೆಯ ಆದೇಶಗಳನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಪಾಲನೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.



ಪಟಾಕಿ ಸಿಡಿಸುವ ಸಮಯದಲ್ಲಿ ಸಂಭವಿಸುವ ದುರಂತಗಳಿಂದ ಹಬ್ಬದ ಸಡಗರಕ್ಕೆ ಭಂಗ ಬರದಂತೆ ತಡೆಯಲು ಜಿಲ್ಲಾಡಳಿತ ರೂಪಿಸಿರುವ ಪ್ರಮುಖ ನಿಯಮಗಳು ಮತ್ತು ಮುಂಜಾಗ್ರತಾ ಕ್ರಮಗಳ ವಿವರಗಳು ಇಂತಿವೆ.

ಹಸಿರು ಪಟಾಕಿಗಳ ಬಳಕೆ ಕಡ್ಡಾಯ: ರಾಷ್ಟ್ರೀಯ ಹಸಿರು ನ್ಯಾಯಾಧಿಕರಣದ ಆದೇಶದಂತೆ ಸಿ.ಎಸ್.ಐ.ಆರ್ – ಎನ್.ಇ.ಇಆರ್.ಐ ಸಂಸ್ಥೆಯು ಶಿಫಾರಸು ಮಾಡಿರುವ ಪರಿಸರಸ್ನೇಹಿ ಹಸಿರು ಪಟಾಕಿಗಳನ್ನು (ಗ್ರೀನ್ ಕ್ರಾಕರ್ಸ್) ಮಾತ್ರ ಸಾರ್ವಜನಿಕರು ಬಳಸಬೇಕು. ಸಾರ್ವಜನಿಕರು ಖರೀದಿಸುವ ಪ್ರತಿಯೊಂದು ಹಸಿರು ಪಟಾಕಿಯ ಪ್ಯಾಕೆಟ್ ಮೇಲೆಯೂ ಅಧಿಕೃತ ಲಾಂಛನ ಹಾಗೂ ಕ್ಯೂ.ಆರ್. ಕೋಡ್ ಇರುವುದು ಕಡ್ಡಾಯವಾಗಿದೆ. ಈ ಅಧಿಕೃತ ಗುರುತುಗಳಿಲ್ಲದ ಯಾವುದೇ ಪಟಾಕಿಯನ್ನು ಹಸಿರು ಪಟಾಕಿ ಎಂದು ಪರಿಗಣಿಸದೆ ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ.

ಪಟಾಕಿ ಸಿಡಿಸಲು ಸಮಯದ ಮಿತಿ: ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ರಾತ್ರಿ 08:00 ಗಂಟೆಯಿಂದ ರಾತ್ರಿ10:00ಗಂಟೆಯವರೆಗೆಮಾತ್ರಪಟಾಕಿಸಿಡಿಸಲುಅವಕಾಶ ಕಲ್ಪಿಸಲಾಗಿದೆ. ಈ ನಿಗದಿತ ಅವಧಿಯನ್ನು ಹೊರತುಪಡಿಸಿ ಇತರೆ ಯಾವುದೇ ಸಮಯದಲ್ಲಿ ಪಟಾಕಿಗಳನ್ನು ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಅಕ್ರಮ ದಾಸ್ತಾನು ಮತ್ತು ಮಾರಾಟದ ವಿರುದ್ಧ ಕ್ರಿಮಿನಲ್ ಕ್ರಮ: ಹಸಿರು ಪಟಾಕಿಗಳನ್ನು ಹೊರತುಪಡಿಸಿ ಇತರೆ ಯಾವುದೇ ಬಗೆಯ ನಿಷೇಧಿತ ಪಟಾಕಿಗಳ ಉತ್ಪಾದನೆ, ಸಂಗ್ರಹ ಮತ್ತು ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಗೋದಾಮುಗಳಲ್ಲಿ ನಿಷೇಧಿತ ಪಟಾಕಿಗಳನ್ನು ಸಂಗ್ರಹಿಸಿಡುವುದು ಕಂಡುಬಂದರೆ ಅಂತಹ ಗೋದಾಮನ್ನು ತಕ್ಷಣವೇ ಸೀಜ್ ಮಾಡಿ, ಸಂಬಂಧಪಟ್ಟವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುತ್ತದೆ.

ಗಡಿ ಚೆಕ್ಪೋಸ್ಟ್ಗಳಲ್ಲಿ ತಪಾಸಣೆ: ಹೊರರಾಜ್ಯಗಳಿಂದ ರಾಜ್ಯದೊಳಗೆ ಅನಧಿಕೃತವಾಗಿ ನಿಷೇಧಿತ ಪಟಾಕಿಗಳನ್ನು ಸಾಗಾಟ ಮಾಡುವುದನ್ನು ತಡೆಯಲು ವಾಣಿಜ್ಯ ತೆರಿಗೆ ಇಲಾಖೆ ಹಾಗೂ ಸಾರಿಗೆ ಇಲಾಖೆಯ ವತಿಯಿಂದ ಗಡಿ ತನಿಖಾ ಠಾಣೆಗಳಲ್ಲಿ ಹದ್ದಿನ ಕಣ್ಣಿಡಲಾಗಿದ್ದು, ಅಕ್ರಮ ಪಟಾಕಿಗಳು ಮತ್ತು ಅವುಗಳನ್ನು ಸಾಗಿಸುವ ವಾಹನಗಳನ್ನು ವಶಪಡಿಸಿಕೊಳ್ಳಲಾಗುತ್ತದೆ.

ನಿಶ್ಯಬ್ದ ವಲಯಗಳಲ್ಲಿ ಸಂಪೂರ್ಣ ನಿರ್ಬಂಧ: ಸ್ಥಳೀಯ ಆಸ್ಪತ್ರೆಗಳು ಮತ್ತು ಶಿಕ್ಷಣ ಸಂಸ್ಥೆಗಳ ಸುತ್ತಮುತ್ತಲಿನ ನಿಶ್ಯಬ್ದ ವಲಯ (ಖುಟಜಟಛಿಜ ಜಠಟಜ) ವ್ಯಾಪ್ತಿಯಲ್ಲಿ ಹಾಗೂ ಸರ್ಕಾರ ಘೋಷಿಸಿರುವ ನಿಷೇಧಿತ ಪ್ರದೇಶಗಳಲ್ಲಿ ಯಾವುದೇ ರೀತಿಯ ಪಟಾಕಿಗಳನ್ನು ಸಿಡಿಸುವುದನ್ನು ನಿಷೇಧಿಸಲಾಗಿದೆ.

*ಸಾರ್ವಜನಿಕ ರಸ್ತೆಗಳಲ್ಲಿ ನಿಷೇಧ:*ಸಾರ್ವಜನಿಕರು ಹಾಗೂ ವಾಹನಗಳು ಓಡಾಡುವ ರಸ್ತೆಗಳ ಮೇಲೆ ಅಥವಾ ರಸ್ತೆ ಮಧ್ಯದಲ್ಲಿ ಪಟಾಕಿ ಸಿಡಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ರಸ್ತೆ ಬಳಕೆದಾರರಿಗೆ ಮತ್ತು ಸಾರ್ವಜನಿಕ ಆಸ್ತಿಪಾಸ್ತಿಗೆ ಯಾವುದೇ ಹಾನಿಯಾಗದಂತೆ ಎಚ್ಚರಿಕೆ ವಹಿಸಬೇಕು.

ಮಕ್ಕಳು, ವೃದ್ಧರು ಹಾಗೂ ಮೂಕ ಪ್ರಾಣಿಗಳ ರಕ್ಷಣೆ: ಪಟಾಕಿ ಸಿಡಿಸುವಾಗ ಹಿರಿಯ ನಾಗರಿಕರು, ರೋಗಿಗಳು, ಮಕ್ಕಳು ಹಾಗೂ ಪ್ರಾಣಿ–ಪಕ್ಷಿಗಳಿಗೆ ಯಾವುದೇ ರೀತಿಯ ಹಿಂಸೆ ಅಥವಾ ತೊಂದರೆಯಾಗದಂತೆ ನೋಡಿಕೊಳ್ಳಬೇಕು.

ಮಕ್ಕಳ ಸುರಕ್ಷತೆ ಮತ್ತು ಜಾಗರೂಕತೆ: ಪಟಾಕಿಗಳು ವ್ಯತಿರಿಕ್ತ ಪ್ರತಿಕ್ರಿಯೆಗಳಿಂದ ತಕ್ಷಣವೇ ಸಿಡಿದು ಗಾಯಗಳಾಗುವ ಅಪಾಯವಿರುತ್ತದೆ. ಆದ್ದರಿಂದ ಚಿಕ್ಕ ಮಕ್ಕಳಿಗೆ ಪಟಾಕಿಗಳನ್ನು ಒಂಟಿಯಾಗಿ ಬಳಸಲು ನೀಡಬಾರದು; ಬದಲಿಗೆ ಹಿರಿಯರ ನೇರ ಮೇಲ್ವಿಚಾರಣೆಯಲ್ಲಿಯೇ ಸೂಕ್ತ ರಕ್ಷಣಾ ಕ್ರಮಗಳೊಂದಿಗೆ ಪಟಾಕಿಗಳನ್ನು ಸಿಡಿಸಬೇಕು.

ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ: ಹಬ್ಬದ ಸಂದರ್ಭದಲ್ಲಿ ಸಂಗ್ರಹವಾಗುವ ಪಟಾಕಿಯ ಕಾಗದದ ಅವಶೇಷಗಳು ಮತ್ತು ಇತರ ಘನತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಎಸೆಯದೆ, ಸ್ಥಳೀಯ ನಗರಸಭೆ, ಪುರಸಭೆ ಹಾಗೂ ಗ್ರಾಮ ಪಂಚಾಯಿತಿಗಳು ವೈಜ್ಞಾನಿಕವಾಗಿ ತ್ವರಿತವಾಗಿ ವಿಲೇವಾ

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning



ಸ್ಟಿಂಗ್ ಆಪರೇಷನ್ ಪ್ರಕರಣ, ಸಿಸಿಬಿ ವಿಚಾರಣೆಗೆ ಹಾಜರಾದ ಕೃಪಾ ಆಳ್ವಾ

ಬೆಂಗಳೂರು: ಮಾಜಿ ಸಿಎಂ ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಿಂದ ಉಚ್ಚಾಟಿತರಾಗಿರುವ ಕೃಪಾ ಆಳ್ವಾ ಸೋಮವಾರ ಸಿಸಿಬಿ ಅಧಿಕಾರಿಗಳ ಮುಂದೆ ವಿಚಾರಣೆಗೆ ಹಾಜರಾದರು.



ಸೈಬರ್ ಕ್ರೈಂ ಪೊಲೀಸರು ಸುಮಾರು 2 ಗಂಟೆಗಳ ಕಾಲ ವಿಚಾರಣೆ ನಡೆಸಿದ್ದಾರೆ.

ವಿಚಾರಣೆಗೆ ಹಾಜರಾಗಲು ಕೃಪಾ ಆಳ್ವಾಗೆ ಸಿಸಿಬಿ ನೋಟಿಸ್ ನೀಡಿತ್ತು. ಮೊಬೈಲ್, ಲ್ಯಾಪ್‌ಟಾಪ್ ಸಮೇತ ವಿಚಾರಣೆಗೆ ಬರುವಂತೆ ಸೂಚಿಸಲಾಗಿತ್ತು. ಪ್ರಕರಣ ಸಂಬಂಧ ಮಧ್ಯಂತರ ನಿರೀಕ್ಷಣಾ ಜಾಮೀನು ಪಡೆದ ಬಳಿಕ ಇದೇ ಮೊದಲ ಬಾರಿಗೆ ಕೃಪಾ ಆಳ್ವಾ ವಿಚಾರಣೆಗೆ ಹಾಜರಾದರು. 2 ಗಂಟೆ ವಿಚಾರಣೆ ಬಳಿಕ ಮತ್ತೆ ನವೆಂಬರ್ 11 ರಂದು ವಿಚಾರಣೆಗೆ ಹಾಜರಾಗುವಂತೆ ಪೊಲೀಸರು ತಿಳಿಸಿದ್ದಾರೆ.

ವಿಚಾರಣೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೃಪಾ ಆಳ್ವಾ ಪರ ವಕೀಲೆ ನಿವಿತಾ, ಕೃಪಾ ಆಳ್ವಾ ಈಗಾಗಲೇ ಹೇಳಿಕೆ ದಾಖಲಿಸಿದ್ದಾರೆ.

ಮತ್ತೊಮ್ಮೆ ಬರೋದಕ್ಕೆ ಹೇಳಿದ್ದರಿಂದ ಈಗ ಬಂದಿದ್ದಾರೆ. ಈಗಾಗಲೇ ಡಿಸಿಪಿ ಎದುರು ಎರಡು ಸಾರಿ ಹೇಳಿಕೆ ಕೊಟ್ಟಿದ್ದರು. ಅಧಿಕೃತವಾಗಿ ಇಂದು ಹೇಳಿಕೆ ನೀಡಲು ನೋಟಿಸ್ ನೀಡಲಾಗಿತ್ತು. ಹೀಗಾಗಿ, ಸಿಸಿಬಿ ಸೈಬರ್ ತನಿಖಾಧಿಕಾರಿ ಮುಂದೆ ಹೇಳಿಕೆ ಕೊಡಲು ಬಂದಿದ್ದಾರೆ ಎಂದು ಹೇಳಿದರು.


ಮಗಳ ಜೊತೆಗೆ ವಿದೇಶಕ್ಕೆ ಹೋಗಿದ್ದರು ಅಷ್ಟೆ. ವಿದೇಶ ಪ್ರವಾಸ ಮೊದಲೇ ನಿಗದಿಯಾಗಿತ್ತು. ಕೇಸ್ ಆದ ಮೇಲೆ ಅವರು ವಿದೇಶಕ್ಕೇನು ಹೋಗಿರಲಿಲ್ಲ. ಕೇವಲ ವಿಚಾರಣೆಗೆ ಕರೆದಿದ್ದಾರೆ. ಅದಕ್ಕೆ ಬಂದಿದ್ದಾರೆ. ನಿರೀಕ್ಷಣಾ ಜಾಮೀನು ಸಿಕ್ಕಬಳಿಕ ಕೃಪಾ ಆಳ್ವಾ ಸುದ್ದಿಗೋಷ್ಠಿ ನಡೆಸಿ ಸಂಪೂರ್ಣವಾಗಿ ಮಾತಾಡಲಿದ್ದಾರೆ ಎಂದು ತಿಳಿಸಿದರು.

ಕಲಬುರ್ಗಿ ಹತ್ಯೆಯ ಹಿಂದೆ ಸಂಘ ಪರಿವಾರದ ಕೈವಾಡ

ಕೊಚ್ಚಿ (ಕೇರಳ): ಪತ್ರಕರ್ತೆ ಗೌರಿ ಲಂಕೇಶ್ ಹಾಗೂ ವಿಚಾರವಾದಿ ಪ್ರೊ. ಎಂ.ಎಂ. ಕಲಬುರ್ಗಿ ಹತ್ಯೆಯ ಹಿಂದೆ ಸಂಘ ಪರಿವಾರದ ಕೈವಾಡವಿದೆ ಎಂದು ಗಂಭೀರವಾಗಿ ಆರೋಪಿಸಿರುವ ಕರ್ನಾಟಕದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಈ ಪ್ರಕರಣದ ಆರೋಪಿಗಳನ್ನು ಮುಂದಿನ ಆರು ತಿಂಗಳಲ್ಲಿ ಜೈಲಿಗೆ ಕಳುಹಿಸುವುದಾಗಿ ಹೇಳಿದ್ದಾರೆ.

ಕೊಚ್ಚಿಯ ಮರೀನ್ ಡ್ರೈವ್‌ನಲ್ಲಿ ನಡೆದ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಅಂಗಸಂಸ್ಥೆಯಾದ ಮುಸ್ಲಿಂ ಯೂತ್ ಲೀಗ್ ರಾಜ್ಯ ಸಮಾವೇಶದಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಈ ವೇಳೆ ಮುಸ್ಲಿಂ ಯೂತ್ ಲೀಗ್‌ನ ಪ್ರಧಾನ ಕಾರ್ಯದರ್ಶಿ ಪಿ.ಕೆ. ಫಿರೋಸ್, ಗೌರಿ ಲಂಕೇಶ್ ಮತ್ತು ಕಲ್ಬುರ್ಗಿ ಹತ್ಯೆಗಳ ಬಗ್ಗೆ ಪ್ರಸ್ತಾಪಿಸಿದ ನಂತರ ಪ್ರತಿಕ್ರಿಯೆ ನೀಡಿದ ಖರ್ಗೆ, "ಪತ್ರಕರ್ತೆ ಗೌರಿ ಲಂಕೇಶ್, ವಿಚಾರವಾದಿ ಪ್ರೊ. ಎಂ.ಎಂ. ಕಲಬುರ್ಗಿ ಮತ್ತು ನರೇಂದ್ರ ದಾಭೋಲ್ಕರ್ ಹತ್ಯೆಗಳ ಹಿಂದೆ ಸಂಘ ಪರಿವಾರಕ್ಕೆ ಸೇರಿದವರೇ ಇದ್ದಾರೆ. ಗಾಂಧೀಜಿಯನ್ನು ಕೊಂದವರೇ ಇವರನ್ನೂ ಕೊಂದಿದ್ದಾರೆ" ಎಂದು ನೇರವಾಗಿ ಆರೋಪಿಸಿದರು.





SAMALOCHANE RANEBENNURSUDDI KANNADA DAILY MORNING, OWNER, PUBLISHER BY: RAJESHWARI S OLEKAR, PUBLISHED FROM: H.NO, 58 MAIN ROAD, YAKALASAPUR, SUB DISTRICT RANEBENNUR, HAVERI, KARNATAKA-581115, PRINTED AT: VEDAMURTHY S T, GAYATHRI PUBLICATIONS, H.NO, 720, NEKAR COLONY, INDUSTRIAL AREA, HAVERI, KARNATAKA- 581115, EDITOR BY: RAJESHWARI S OLEKAR